Akashvani : Bangalore
Regional Bulletin In Kannada
27.01.2026 / 14.30 hrs
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ರಾಜ್ಯದ ಆರು ಸಾವಿರ ಗ್ರಾಮ ಪಂಚಾಯಿತಿಗಳಿಗೆ ಗಾಂಧೀಜಿ ಹೆಸರು- ಮುಖ್ಯಮಂತ್ರಿ ಸಿದ್ದರಾಮಯ್ಯ ಘೋಷಣೆ
- ಎಲ್ಲಾ ಶಾಸಕರಿಗೆ ಭದ್ರತೆ ನೀಡಲು ಸರ್ಕಾರ ಬದ್ಧ- ಗೃಹ ಸಚಿವ ಡಾ.ಜಿ.ಪರಮೇಶ್ವರ್
- ಅಬಕಾರಿ ಸಚಿವ ಆರ್.ಬಿ.ತಿಮ್ಮಾಪುರ ರಾಜೀನಾಮೆಗೆ ಆಗ್ರಹಿಸಿ ಪ್ರತಿಪಕ್ಷಗಳಿಂದ ವಿಧಾನಸಭೆಯಲ್ಲಿ ಧರಣಿ
- ಮಂಡ್ಯ ಮೈಶುಗರ್ ಸಕ್ಕರೆ ಕಾರ್ಖಾನೆ ಖಾಸಗಿಯವರಿಗೆ ನೀಡುವುದಿಲ್ಲ- ಕಾರ್ಖಾನೆ ಅಧ್ಯಕ್ಷರಿಂದ ಸ್ಪಷ್ಟನೆ

<><*<><>*><>

ಕೇಂದ್ರ ಸರ್ಕಾರದ ನರೇಗಾ ಯೋಜನೆಗೆ ತಿದ್ದುಪಡಿ ತಂದು ವಿಕಸಿತ ಭಾರತ್ ಜಿ-ರಾಮ್-ಜಿ ಯೋಜನೆಯನ್ನು ಜಾರಿಗೊಳಿಸಿರುವುದನ್ನು ಖಂಡಿಸಿ ಕೆಪಿಸಿಸಿ ವತಿಯಿಂದ ಬೆಂಗಳೂರಿನ ಸ್ವಾತಂತ್ರ್ಯ ಉದ್ಯಾವನದಲ್ಲಿ ಬೃಹತ್ ಪ್ರತಿಭಟನೆ ನಡೆಯಿತು. ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಎಐಸಿಸಿ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೇವಾಲಾ ಪ್ರತಿಭಟನೆಯಲ್ಲಿ ಭಾಗಿಯಾಗಿದ್ದರು. ಪ್ರತಿಭಟನೆಯಲ್ಲಿ ಭಾಗವಹಿಸಿ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ರಾಜ್ಯದಲ್ಲಿರುವ ಸುಮಾರು ಆರು ಸಾವಿರ ಪಂಚಾಯಿತಿ ಕಚೇರಿಗಳಿಗೆ ಮಹಾತ್ಮಾಗಾಂಧಿಯವರ ಹೆಸರಿಡಲಾಗುವುದು ಎಂದು ಘೋಷಿಸಿದ್ದಾರೆ. ಕೇಂದ್ರ ಸರ್ಕಾರ ಮನ್ರೇಗಾ ಯೋಜನೆಯ ಹೆಸರು ಬದಲಿಸುವ ಮೂಲಕ ರಾಜಕೀಯ ನಡೆಸುತ್ತಿದೆ ಎಂದು ಆರೋಪಿಸಿದ್ದಾರೆ. ತಾಲೂಕು ಪಂಚಾಯಿತಿ ಮತ್ತು ಗ್ರಾಮಪಂಚಾಯಿತಿಗಳ ಮೂಲಕ ಉದ್ಯೋಗ ಪಡೆಯುತ್ತಿದ್ದ ಹಳ್ಳಿ ಜನರು ಇದೀಗ ಅಧಿಕಾರಿಗಳ ಸುಳಿಗೆ ಸಿಲುಕುವ ಅನಿವಾರ್ಯತೆ ಸೃಷ್ಠಿಯಾಗಿದೆ ಎಂದು ದೂರಿದ್ದಾರೆ.

ಧ್ವನಿ; ಮುಖ್ಯಮಂತ್ರಿ ಸಿದ್ದರಾಮಯ್ಯ ( ಸೆಕೆಂಡ್ಸ್)

ಇದೇ ವೇಳೆ ಮಾತನಾಡಿದ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಮನ್ರೇಗಾ ಯೋಜನೆ ಕುರಿತಂತೆ ಕೇಂದ್ರ ಸಚಿವ ಕುಮಾರಸ್ವಾಮಿ ಹಾಗೂ ಬಿಜೆಪಿ ನಾಯಕರು ಚರ್ಚೆಗೆ ಬರಲಿ ಎಂದು ಆಹ್ವಾನ ನೀಡಿದ್ದಾರೆ. ಬಿಜೆಪಿ ಆಡಳಿತವಿರುವ ರಾಜ್ಯಗಳಲ್ಲಿಯೂ ಕೇಂದ್ರ ಸರ್ಕಾರದ ನೂತನ

ಯೋಜನೆ ಅನುಷ್ಠಾನ ಸಾಧ್ಯವಿಲ್ಲ ಎಂದು ಅಭಿಪ್ರಾಯಪಟ್ಟಿದ್ದಾರೆ. ಬಳಿಕ ಮುಖ್ಯಮಂತ್ರಿ ಹಾಗೂ ಉಪಮುಖ್ಯಮಂತ್ರಿ ನೇತೃತ್ವದಲ್ಲಿ ಲೋಕಭವನಕ್ಕೆ ತೆರಳಿ ರಾಜ್ಯಪಾಲರಿಗೆ ಕಾಂಗ್ರೆಸ್ ನಾಯಕರು ಮನವಿ ಸಲ್ಲಿಸಿದರು.

<><*<><>*><>

ರಾಜ್ಯದ ಎಲ್ಲಾ ಶಾಸಕರಿಗೂ ಭದ್ರತೆ ನೀಡಲು ಸರ್ಕಾರ ಬದ್ಧವಾಗಿದೆ ಎಂದು ಗೃಹಸಚಿವ ಡಾ.ಜಿ.ಪರಮೇಶ್ವರ್ ವಿಧಾನಸಭೆಯಲ್ಲಿ ಸ್ಪಷ್ಟಪಡಿಸಿದ್ದಾರೆ. ಪ್ರಶ್ನೋತ್ತರ ಕಲಾಪದಲ್ಲಿ ದೇವದುರ್ಗ ಶಾಸಕಿ ಕರೆಮ್ಮ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಕರೆಮ್ಮ ಅವರಿಗೆ ಭದ್ರತೆ ನೀಡಲು ಸೂಚಿಸಲಾಗಿದ್ದು, ಅದೇ ರೀತಿ ರಾಜ್ಯದ ಎಲ್ಲಾ ಶಾಸಕರಿಗೂ ಭದ್ರತೆ ನೀಡಲು ಸರ್ಕಾರ ಬದ್ಧವಾಗಿದೆ ಎಂದು ಭರವಸೆ ನೀಡಿದ್ದಾರೆ. ಇದಕ್ಕೂ ಮೊದಲು ತಮಗೆ ಭದ್ರತೆ ಒದಗಿಸುವಂತೆ ರಾಜಾಜಿನಗರ ಶಾಸಕ ಸುರೇಶ್ ಕುಮಾರ್ ಮನವಿ ಮಾಡಿದರು. ಇದಕ್ಕೆ ಪ್ರತಿಪಕ್ಷ ನಾಯಕ ಆರ್.ಅಶೋಕ ದನಿಗೂಡಿಸಿ ಭದ್ರತೆ ಒದಗಿಸುವುದು ಸರ್ಕಾರದ ಕರ್ತವ್ಯ ಎಂದು ತಿಳಿಸಿದರು. ಪ್ರತಿಪಕ್ಷ ಸದಸ್ಯರ ಆತಂಕಕ್ಕೆ ಸ್ಪಂದಿಸಿದ ಗೃಹ ಸಚಿವ ಡಾ.ಜಿ.ಪರಮೇಶ್ವರ್, ಶಾಸಕ ಸುರೇಶ್ ಕುಮಾರ್ ಅವರಿಗೆ ಭದ್ರತೆ ಒದಗಿಸಲಾಗುವುದು ಎಂದು ಭರವಸೆ ನೀಡಿದರು. ರಾಜ್ಯಾದ್ಯಂತ ನಡೆಯುವ ಅಕ್ರಮ ಮರಳು ಸಾಗಣೆ ತಡೆಯಲು ಸರ್ಕಾರ ಕಟ್ಟುನಿಟ್ಟಿನ ಕ್ರಮಕೈಗೊಳ್ಳಲಿದೆ ಎಂದು ಸಚಿವರು ಸದನದಲ್ಲಿ ಇದೇ ವೇಳೆ ತಿಳಿಸಿದ್ದಾರೆ.

<><*<><>*><>

ಬಹುಕೋಟಿ ರೂಪಾಯಿ ಹಗರಣದಲ್ಲಿ ಭಾಗಿಯಾದ ಅಬಕಾರಿ ಸಚಿವ ಆರ್.ಬಿ.ತಿಮ್ಮಾಪುರ ರಾಜೀನಾಮೆ ನೀಡಬೇಕು ಎಂದು ಒತ್ತಾಯಿಸಿ ವಿಧಾನಸಭೆಯಲ್ಲಿಂದು ಬಿಜೆಪಿ ಸದಸ್ಯರು ಪ್ರತಿಪಕ್ಷ ನಾಯಕ ಆರ್.ಅಶೋಕ ನೇತೃತ್ವದಲ್ಲಿ ಸದನದ ಬಾವಿಗೆ ಇಳಿದು ಘೋಷಣೆ ಕೂಗಿದರು. ಅಬಕಾರಿ ಇಲಾಖೆಯ ಹಗರಣಕ್ಕೆ ಸಂಬಂಧಿಸಿದಂತೆ ಮದ್ಯ ಮಾರಾಟಗಾರರ ಸಂಘದ ಸದಸ್ಯರು ಲೋಕಸಭಾ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ, ರಾಷ್ಟ್ರಪತಿಗಳಿಗೆ ಹಾಗೂ ಪ್ರಧಾನಿಗೆ ದೂರು ನೀಡಲು ನಿರ್ಧರಿಸಿದ್ದಾರೆ. ಈ ಹಗರಣದ ನೈತಿಕ ಜವಾಬ್ದಾರಿ ಹೊತ್ತು ಅಬಕಾರಿ ಸಚಿವರು ರಾಜೀನಾಮೆ ನೀಡಬೇಕು ಎಂದು ಒತ್ತಾಯಿಸಿದರು. ಹಗರಣದಲ್ಲಿ ಭಾಗಿಯಾದ ಅಬಕಾರಿ ಸಚಿವರ ರಾಜೀನಾಮೆ ಪಡೆಯಲು ಏಕೆ ಹಿಂಜರಿಯಲಾಗುತ್ತದೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಪ್ರಶ್ನಿಸಿದರು. ಈ ಹಗರಣಕ್ಕೆ ಸಂಬಂಧಿಸಿದಂತೆ ನಿಲುವಳಿ ಸೂಚನೆ ಮಂಡಿಸಲು ಅವಕಾಶ ನೀಡಬೇಕು ಎಂದು ಆರ್.ಅಶೋಕ ಒತ್ತಾಯಿಸಿದರು. ಸಭಾಧ್ಯಕ್ಷ ಯು.ಟಿ.ಖಾದರ್ ಮಾತನಾಡಿ, ಈ ವಿಷಯವನ್ನು ನಿಯಮ ೬೯ ರ ಅಡಿಯಲ್ಲಿ ಚರ್ಚೆಗೆ ಅವಕಾಶ ನೀಡಲಾಗುವುದ ಎಂದು ಭರವಸೆ ನೀಡಿದ ಹಿನ್ನಲೆಯಲ್ಲಿ ಪ್ರತಿಪಕ್ಷ ಸದಸ್ಯರು ಧರಣಿ ವಾಪಾಸ್ ಪಡೆದರು. ಬಳಿಕ ಸಭಾಧ್ಯಕ್ಷ

ಯು.ಟಿ.ಖಾದರ್ ಅವರು ೨೦೨೬ ನೇ ಸಾಲಿನಲ್ಲಿ ಪದ್ಮ ಪ್ರಶಸ್ತಿ ಪಡೆದ ನಾಡಿನ ಗಣ್ಯ ಸಾಧಕರಿಗೆ ಸದನದಲ್ಲಿ ಅಭಿನಂದನೆ ಸಲ್ಲಿಸಿದರು.

<><*<><>*><>

೨೦೨೭ರ ಅಂತ್ಯದ ವೇಳೆಗೆ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಮೆಟ್ರೋ ರೈಲು ಸಂಪರ್ಕ ಕಲ್ಪಿಸುವ ಕಾಮಗಾರಿ ಪೂರ್ಣಗೊಳಿಸಲಾಗುವುದು ಎಂದು ಕಂದಾಯ ಸಚಿವ ಕೃಷ್ಣಬೈರೇಗೌಡ ವಿಧಾನಸಭೆಯಲ್ಲಿಂದು ಭರವಸೆ ನೀಡಿದ್ದಾರೆ. ಪ್ರಶ್ನೋತ್ತರ ಕಲಾಪದಲ್ಲಿ ದೊಡ್ಡಬಳ್ಳಾಪುರ ಶಾಸಕ ಧೀರಜ್ ಮುನಿರಾಜು ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ವಿಮಾನ ನಿಲ್ದಾಣ ಮಾರ್ಗವಾಗಿ ದೊಡ್ಡಬಳ್ಳಾಪುರಕ್ಕೆ ಮೆಟ್ರೋ ರೈಲು ಸಂಪರ್ಕ ಕಲ್ಪಿಸುವ ಬಗ್ಗೆ ಚರ್ಚೆ ನಡೆಯುತ್ತಿದೆ ಎಂದು ತಿಳಿಸಿದ್ದಾರೆ. ಇದೇ ವೇಳೆ, ಬಾಗಲಕೋಟೆಯ ಜಮಖಂಡಿ ತಾಲ್ಲೂಕಿನ ಹಿಪ್ಪರಗಿ ಬ್ಯಾರೇಜ್ ನ ೨೧ ಕ್ರಸ್ಟ್ ಗೇಟ್‌ಗಳನ್ನು ೪೦ ಕೋಟಿ ರೂಪಾಯಿ ವೆಚ್ಚದಲ್ಲಿ ಬದಲಾಯಿಸಿ ಹೊಸ ಗೇಟ್‌ಗಳನ್ನು ಅಳವಡಿಸಲಾಗುವುದು ಎಂದು ಸಚಿವ ಕೃಷ್ಣಬೈರೇಗೌಡ ಸ್ಪಷ್ಟಪಡಿಸಿದ್ದಾರೆ.

<><*<><>*><>

ತುಮಕೂರು ಜಿಲ್ಲೆ ಚಿಕ್ಕನಾಯಕನಹಳ್ಳಿ ಪುರಸಭೆ ವ್ಯಾಪ್ತಿಯಲ್ಲಿ ಕರ್ನಾಟಕ ನಗರಾಭಿವೃದ್ಧಿ ಮತ್ತು ಒಳಚರಂಡಿ ಮಂಡಳಿ ಅಡಿಯಲ್ಲಿ ಕೈಗೊಂಡಿರುವ ಒಳಚರಂಡಿ ಯೋಜನೆಯ ಕಾಮಗಾರಿಯನ್ನು ಶೀಘ್ರದಲ್ಲೇ ಪೂರ್ಣಗೊಳಿಸಲಾಗುವುದು ಎಂದು ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವ ಭೈರತಿ ಸುರೇಶ್ ಮೇಲ್ಮನೆಯಲ್ಲಿ ಭರವಸೆ ನೀಡಿದ್ದಾರೆ. ಮೈಸೂರು ವ್ಯಾಪ್ತಿಯಲ್ಲಿ ನಗರೋತ್ಥಾನ ಯೋಜನೆಯ ೪ನೇ ಹಂತದ ಅಡಿಯಲ್ಲಿ ಬಾಕಿ ಇರುವ ಕಾಮಗಾರಿಗಳನ್ನು ಪೂರ್ಣಗೊಳಿಸಲು ಕಾಲಮಿತಿ ನಿಗದಿ ಮಾಡಲಾಗುವುದು ಎಂದು ಸದಸ್ಯ ಸಿ.ಎನ್.ಮಂಜೇಗೌಡ ಅವರ ಪ್ರಶ್ನೆಗೆ ಪೌರಾಡಳಿತ ಸಚಿವ ರಹೀಂ ಖಾನ್ ಪರಿಷತ್‌ನಲ್ಲಿ ಉತ್ತರ ನೀಡಿದ್ದಾರೆ.

<><*<><>*><>

ಮಂಡ್ಯ ಮೈಶುಗರ್ ಸಕ್ಕರೆ ಕಾರ್ಖಾನೆಯನ್ನು ಖಾಸಗಿಯವರಿಗೆ ವಹಿಸುವ ಪ್ರಶ್ನೆಯೇ ಇಲ್ಲ ಎಂದು ಕಾರ್ಖಾನೆ ಅಧ್ಯಕ್ಷ ಸಿ.ಡಿ.ಗಂಗಾಧರ್ ಸ್ಪಷ್ಟಪಡಿಸಿದ್ದಾರೆ. ಮಂಡ್ಯದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯ ಸರ್ಕಾರವೇ ಕಾರ್ಖಾನೆಯನ್ನು ಮುನ್ನಡೆಸಲಿದ್ದು, ಪುನಶ್ಚೇತನಕ್ಕಾಗಿ ಹಾಗೂ ಸಮರ್ಥವಾಗಿ ನಡೆಸಲು ಕ್ರಮ ವಹಿಸಲಾಗುತ್ತಿದೆ ಎಂದು ಹೇಳಿದ್ದಾರೆ. ಕಾರ್ಖಾನೆಗೆ ಸರ್ಕಾರ ೧೧೩ ಕೋಟಿ ರೂಪಾಯಿ ಆರ್ಥಿಕ ನೆರವು ನೀಡಿ ಹಿಂದಿನ ಸರ್ಕಾರಕ್ಕಿಂತ ಹೆಚ್ಚು ಶಕ್ತಿಯನ್ನು ನೀಡಿದೆ. ೨೦೨೬-೨೭ನೇ ಸಾಲಿನ ಹಂಗಾಮಿಗೆ ಈಗಾಗಲೇ ಬಾಯ್ಲಿಂಗ್ ಹೌಸ್, ಬಾಯ್ಲರ್ ದುರಸ್ತಿ, ಕಾಕಂಬಿ ಟ್ಯಾಂಕ್ ನಿರ್ಮಾಣಕ್ಕೆ ಸುಮಾರು ೭೪ ಕೋಟಿ ರೂಪಾಯಿ ಅಂದಾಜು ವೆಚ್ಚದ ಪಟ್ಟಿ ತಯಾರಿಸಿ ಸರ್ಕಾರಕ್ಕೆ ಸಲ್ಲಿಸಲಾಗಿದ್ದು, ಅನುಮೋದನೆ ಹಂತದಲ್ಲಿದೆ

ಎಂದು ತಿಳಿಸಿದ್ದಾರೆ. ಶಿಸ್ತು ಬದ್ಧವಾಗಿ ಹಾಗೂ ಪಾರದರ್ಶಕವಾಗಿ ಕಾರ್ಖಾನೆ ನಡೆಸಲಾಗುವುದು ಎಂದು ಭರವಸೆ ನೀಡಿದ್ದಾರೆ.

<><*<><>*><>

೨ ಸಾವಿರದ ೫೦೦ ಕೋಟಿ ರೂಪಾಯಿಗಳ ಅಬಕಾರಿ ಹಗರಣದ ಆರೋಪದ ಹಿನ್ನಲೆಯಲ್ಲಿ ಅಬಕಾರಿ ಸಚಿವ ಆರ್.ಬಿ.ತಿಮ್ಮಾಪುರ ರಾಜೀನಾಮೆಗೆ ಒತ್ತಾಯಿಸಿ ಬಿಜೆಪಿ ವಿಧಾನಸೌಧದ ಮಹಾತ್ಮಾಗಾಂಧಿ ಪ್ರತಿಮೆಯ ಮುಂದೆ ಇಂದು ಪ್ರತಿಭಟನೆ ನಡೆಸಿತು. ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್.ಅಶೋಕ, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ನೇತೃತ್ವದಲ್ಲಿ ಪ್ರತಿಭಟನೆ ನಡೆಯಿತು. ಬಳಿಕ ಮಾತನಾಡಿದ ಪ್ರತಿಪಕ್ಷ ನಾಯಕ ಆರ್.ಅಶೋಕ, ಕೇರಳ, ಅಸ್ಸಾಂ ಮತ್ತು ತಮಿಳುನಾಡಿನಲ್ಲಿ ಕಾಂಗ್ರೆಸ್ ಪಕ್ಷದ ಚುನಾವಣಾ ಪ್ರಚಾರಗಳಿಗೆ ಹಣಕಾಸು ಒದಗಿಸಲು ಈ ಹಣ ಸಂಗ್ರಹಿಸಲಾಗುತ್ತಿದೆ ಎಂದು ಆರೋಪಿಸಿದ್ದಾರೆ. ರಾಜ್ಯಾದ್ಯಂತ ೧ ಸಾವಿರ ೫೦೦ ರಿಂದ ೨ ಸಾವಿರದವರಗೆ ಹೊಸ ಮದ್ಯದಂಗಡಿಗಳಿಗೆ ಪರವಾನಗಿ ನೀಡಲಾಗಿದೆ ಎಂದು ತಿಳಿಸಿದ್ದಾರೆ. ಪ್ರತಿ ಪರವಾನಿಗೆಗೆ ೨ ಕೋಟಿಯಿಂದ ಎರಡೂವರೆ ಕೋಟಿಯವರೆಗೆ ಹಣ ವಸೂಲಿ ಮಾಡಲಾಗುತ್ತಿದೆ ಎಂದು ದೂರಿದ್ದಾರೆ.

<><*<><>*><>

ಮುಂಬರುವ ರಾಜ್ಯ ಬಜೆಟ್‌ನಲ್ಲಿ ದಾವಣಗೆರೆ ಜಿಲ್ಲೆಯ ಅಭಿವೃದ್ಧಿಗೆ ಪೂರಕವಾದ ಹಲವು ಪ್ರಸ್ತಾವನೆಗಳನ್ನು ಸಲ್ಲಿಸಲಾಗಿದೆ ಎಂದು ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್. ಮಲ್ಲಿಕಾರ್ಜುನ್ ತಿಳಿಸಿದ್ದಾರೆ. ದಾವಣಗೆರೆ ಮಹಾನಗರ ಪಾಲಿಕೆ ವ್ಯಾಪ್ತಿಯ ವಿವಿಧ ವಾರ್ಡ್‌ಗಳಲ್ಲಿ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿ ಮಾತನಾಡಿದ ಅವರು, ವಿಶೇಷವಾಗಿ ನೀರಾವರಿ, ಶಿಕ್ಷಣ ಮತ್ತು ಆರೋಗ್ಯ ಕ್ಷೇತ್ರಗಳ ಸುಧಾರಣೆಗೆ ಹೆಚ್ಚಿನ ಆದ್ಯತೆ ನೀಡಲಾಗಿದೆ ಎಂದು ಹೇಳಿದ್ದಾರೆ

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>